# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **154** |
| ಸದಸ್ಯರ ಹೆಸರು | : | ಡಾ: ಎಂ.ಜಿ. ಮುಳೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11-08-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಜಾನಾಪುರ ಗ್ರಾಮದ ಹನುಮಂತ ನಗರದಲ್ಲಿ ಕಳೆದ ಹಲವು ವರ್ಷಗಳಿಂದ ರೈತರ ತೋಟದ ಮನೆಗಳಿಗೆ ವಿದ್ಯುತ್ ಸಂಪರ್ಕವಿಲ್ಲದದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಜಾನಾಪುರ ಗ್ರಾಮದ ಹನುಮಂತ ನಗರದಲ್ಲಿ 9 ರೈತರ ತೋಟದ ಮನೆಗಳಿದ್ದು, 5 ತೋಟದ ಮನೆಗಳಿಗೆ ಈಗಾಗಲೇ ರೈತರು ವಿದ್ಯುತ್ ಸಂಪರ್ಕ ಪಡೆದಿರುತ್ತಾರೆ. ಈ ಮನೆಗಳಿಗೆ, ಪ್ರಸ್ತುತ 11 ಕೆ.ವಿ.ನೀರಾವರಿ ಪಂಪ್‌ಸೆಟ್ ಫೀಡರ್‌ನ ಮೂಲಕ ಹಗಲು ವೇಳೆ 7 ಗಂಟೆ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಉಳಿದ 4 ತೋಟದ ಮನೆಗಳಿಗೆ ವಿದ್ಯುತ್ ಸಂಪರ್ಕ ಕೋರಿ ಅರ್ಜಿ ಬಂದಲ್ಲಿ ಕಂಪನಿ ನಿಯಾಮಾನುಸಾರ ಕ್ರಮ ಕೈಗೊಳ್ಳಲಾಗುವುದು.<br><br>ವಿದ್ಯುತ್ ಸಂಪರ್ಕ ಪಡೆದ ಸದರಿ 5 ರೈತರು, ರಾತ್ರಿ ವೇಳೆಯಲ್ಲಿ ಕೂಡಾ ವಿದ್ಯುತ್ ಸರಬರಾಜು ಕೋರಿರುತ್ತಾರೆ. ಪ್ರಸ್ತುತ, ಸದರಿ ಮನೆಗಳಿಗೆ ವಿದ್ಯುತ್ ಪೂರೈಸುತ್ತಿರುವ 11 ಕೆ.ವಿ ಐ.ಪಿ.ಫೀಡರ್ ನ ಮೇಲೆ ರೋಸ್ಟರ್ ಜಿ.ಓ.ಎಸ್ (GOS) ಅಳವಡಿಸುವ ಕಾಮಗಾರಿ ಪೂರ್ಣಗೊಂಡಿದ್ದು, ಶೀಘ್ರದಲ್ಲಿ ಓವರ್-ಲೋಡ್ ಪ್ರೊಟೆಕ್ಷನ್ ರಿಲೇ (OLP Relay) ಅಳವಡಿಸಿ ರಾತ್ರಿ ವೇಳೆ ಸಿಂಗಲ್ ಫೇಸ್ ವಿದ್ಯುತ್ ಪೂರೈಕೆಗೆ ಕ್ರಮ ವಹಿಸಲಾಗಿದೆ. |
| ಆ) | ಬಂದಿದ್ದಲ್ಲಿ, ಅಲ್ಲಿನ ರೈತರು ಸಾಕಷ್ಟು ಬಾರಿ ಈ ಕುರಿತು ಮನವಿ ಸಲ್ಲಿಸಿದರೂ, ವಿದ್ಯುತ್ ಸಂಪರ್ಕ ಒದಗಿಸದಿರಲು ಕಾರಣವೇನು; | |
| ಇ) | ಈ ತೋಟದ ಮನೆಗಳಿಗೆ ವಿದ್ಯುತ್ ಸಂಪರ್ಕವನ್ನು ಯಾವ ಕಾಲಮಿತಿಯಲ್ಲಿ ಕಲ್ಪಿಸಲಾಗುವುದು? | |

ಸಂಖ್ಯೆ: ಎನರ್ಜಿ 162 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು